**ದಿನಾಂಕ: 21.11.2020 ರಂದು ಸಮಯ 11.00 ಗಂಟೆಗೆ ವಾರ್ಡ್ 154-ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿಧ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಆನಂದ.ಜಿ, ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ರಾಜೇಂದ್ರಪ್ರಸಾದ್. ಸಿ, ಸಬ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಠಾಣೆ
5. ಶ್ರೀ. ಹೊನ್ನರಾಜಯ್ಯ.ಎನ್, ಎ.ಎಸ್.ಐ ಬಸವನಗುಡಿ ಸಂಚಾರಿ ಠಾಣೆ
6. ಶ್ರೀ. ಕೃಷ್ಣಮೂರ್ತಿ.ಎಂ, ಕಿರಿಯ ಅಭಿಯಂತರರು, BESCOM ವಾರ್ಡ್ 154
7. ಡಾ|| ಯೋಗೇಶ್, ವೈದ್ಯಾಧಿಕಾರಿ, ವಾರ್ಡ್ 154
8. ಡಾ|| ಪ್ರಕೃತಿ, ವೈದ್ಯಾಧಿಕಾರಿ, ವಾರ್ಡ್ 154
9. ಶ್ರೀ.ಬಿ.ಆರ್. ಕುಬೇಂದ್ರ, ಕಂದಾಯ ವಸೂಲಿಗಾರರು ವಾರ್ಡ್ 154

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸಿರುವ ಮೇರೆಗೆ ದಿನಾಂಕ: 21.11.2020 ರಂದು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

1) ನೋಡಲ್ ಅಧಿಕಾರಿಗಳು ಮಾತನಾಡಿ ಈ.ಎ.ಟಿ ರಸ್ತೆಯಲ್ಲಿರುವ ಸಾರ್ವಜನಿಕರಿಂದ ಹಾಗೂ ಬಸವನಗುಡಿ ಪೋಲೀಸ್ ಠಾಣಾಧಿಕಾರಿಗಳು ಹಲವು ಬಾರಿ ಪತ್ರಗಳನ್ನು ಬರೆದು ಈ.ಎ.ಟಿ ರಸ್ತೆಯಲ್ಲಿರುವ ಪಾದಚಾರಿ ಮಾರ್ಗದಲ್ಲಿರುವ ತಳ್ಳುವ ಗಾಡಿ ಹಾಗೂ ಅನಧಿಕೃತ ಪೆಟ್ಟಿ ಅಂಗಡಿಗಳನ್ನು ತೆರವುಗೊಳಿಸುವಂತೆ ಕೋರಿರುವ ಹಿನ್ನಲೆಯಲ್ಲಿ ಹಾಗೂ ಹಿಂದಿನ ಸಭೆಗಳಲ್ಲಿ ತಿಳಿಸಿರುವಂತೆ ಸದರಿ ರಸ್ತೆಯಲ್ಲಿರುವ ತಳ್ಳುವ ಗಾಡಿಗಳನ್ನು ಹಾಗೂ ಪೆಟ್ಟಿ ಅಂಗಡಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ದಿನಾಂಕ: 20-11-2020 ರಂದು ಮಧ್ಯಾಹ್ನ 12.00 ಗಂಟೆಗೆ ಕಾರ್ಯಾಚರಣೆಯನ್ನು ಹಮ್ಮಿಕೊಂಡು ಪಾದಚಾರಿ ಮಾರ್ಗದಲ್ಲಿರುವ ತಳ್ಳುವ ಗಾಡಿ ಹಾಗೂ ಅನಧಿಕೃತ ಪೆಟ್ಟಿ ಅಂಗಡಿಗಳನ್ನು ತೆರವುಗೊಳಿಸಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಿರಿಯ ಅಭಿಯಂತರರು ತಿಳಿಸಿರುತ್ತಾರೆ.

2) ನೋಡಲ್ ಅಧಿಕಾರಿಗಳು ಮಾತನಾಡಿ ಪ್ರತಿ ವರ್ಷದಂತೆ ಈ ವರ್ಷದ ಕಾರ್ತೀಕ ಮಾಸದ ಕೊನೆಯ ಕಾರ್ತೀಕ ಸೋಮವಾರದಂದು ಬಸವನಗುಡಿಯ ದೊಡ್ಡಬಸವಣ್ಣ ದೇವಸ್ಥಾನದಲ್ಲಿ ನಡೆಯುವ ಐತಿಹಾಸಿಕ ಕಡಲೆಕಾಯಿ ಪರಿಷೆಯ ಪ್ರಯುಕ್ತ ಕೋವಿಡ್-19 ಸೋಂಕು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಈ ಐತಿಹಾಸಿಕ ಕಡಲೆಕಾಯಿ ಪರಿಷೆಯಲ್ಲಿ ದಿನಕ್ಕೆ ಸುಮಾರು 30 ರಿಂದ 40 ಸಾವಿರ ಜನ ಸೇರುವ ನಿರೀಕ್ಷೆ ಇರುವುದರಿಂದ ಕೋವಿಡ್-19 ಇನ್ನೂ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಆದ್ದರಿಂದ ಇದನ್ನು ಕೋವಿಡ್-19 ಸೋಂಕನ್ನು ತಡೆಯುವ ಹಿನ್ನಲೆಯಲ್ಲಿ ಬುಲ್‌ಟೆಂಪಲ್ ರಸ್ತೆಯ ಬೀದಿ ಬದಿಯ ಪಾದಚಾರಿ ಮಾರ್ಗದಲ್ಲಿ ಯಾವುದೇ ರೀತಿಯ ಅಂಗಡಿ ಮುಂಗಟ್ಟುಗಳನ್ನು ಹಾಕದಂತೆ ಹಾಗೂ ತೆರೆಯದಂತೆ ಅಗತ್ಯ ಕ್ರಮವಹಿಸಲು ಈ ಮೂಲಕ ತಮ್ಮಲ್ಲಿ ಕೋರಲಾಗಿದೆ.

**ಕ್ರಮ: - ಆರೋಗ್ಯಾಧಿಕಾರಿಗಳು (.ಬಗು) ರವರಿಗೆ ಕ್ರಮವಹಿಸಲು ಮತ್ತು ಠಾಣಾಧಿಕಾರಿಗಳು ಬಸವನಗುಡಿ ಕಾನೂನು ಮತ್ತು ಸುವ್ಯವಸ್ಥೆ ಪೋಲೀಸ್ ಠಾಣೆ ರವರಿಗೆ ಸಹರಿಸಲು ಕೋರಲಾಗಿರುತ್ತದೆ.**

3) ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಬರುವ ರಸ್ತೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಕ್ರಮ ಕೈಗೊಳ್ಳುವುದು ಹಾಗೂ 14ನೇ ಹಣಕಾಸಿನ ಅನುದಾನದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಶೀಘ್ರವಾಗಿ ಸಲ್ಲಿಸಿ ಕೆಲಸ ಪ್ರಾರಂಭಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

**ಕ್ರಮ:- ಕಿರಿಯ ಅಭಿಯಂತರರು, ವಾರ್ಡ್ 154**

>>>>2

Scanned with CamScanner

4) ನೋಡಲ್ ಅಧಿಕಾರಿಗಳು ಮಾತನಾಡಿ ಎನ್.ಆರ್. ಕಾಲೋನಿ 2ನೇ, 4ನೇ, 5ನೇ ಮತ್ತು 9ನೇ ಮುಖ್ಯರಸ್ತೆ ಹಾಗೂ ಡಿ.ವಿ.ಜಿ ಮುಖ್ಯರಸ್ತೆ, ಜಲಮಂಡಳ ರವರು ಹೊಸದಾಗಿ ಒಳಚರಂಡಿ ಪೈಪುಗಳನ್ನು ಅಳವಡಿಸಲು ರಸ್ತೆಯನ್ನು ಅಗೆದಿರುವುದನ್ನು ಕೂಡಲೇ ರಸ್ತೆಯನ್ನು ಪೂರ್ವಸ್ಥಿತಿಗೆ ತರಲು ತಿಳಿಸುತ್ತಾ ಸದರಿ ವಿಷಯವಾಗಿ ಶೀಘ್ರವಾಗಿ ಸಾರ್ವಜನಿಕರ ಹಿತದೃಷ್ಟಿಯಿಂದ ಅಗತ್ಯ ಕ್ರಮಕೈಗೊಳ್ಳಲು ಕಾರ್ಯಪಾಲಕ ಅಭಿಯಂತರು (BWSSB) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB) MNK Park ರವರಿಗೆ ಕೋರಲಾಗಿದೆ.

**ಕ್ರಮ : ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)**
**MNK Park ರವರಿಗೆ ಕ್ರಮ ವಹಿಸಲು ಕೋರಲಾಗಿರುತ್ತದೆ.**

5) ನೋಡಲ್ ಅಧಿಕಾರಿಗಳು ಮಾತನಾಡಿ 2ನೇ ಮುಖ್ಯರಸ್ತೆ ತ್ಯಾಗರಾಜನಗರ, ಗಂಗಮ್ಮ ದೇವಸ್ಥಾನದ ರಸ್ತೆ, ದತ್ತಾತ್ರೇಯ ದೇವಸ್ಥಾನದ ರಸ್ತೆ, ಮುನೇಶ್ವರ ರಸ್ತೆಗಳಲ್ಲಿ ಬೆಸ್ಕಾಂ HD ಕೇಬಲ್‌ಗಳನ್ನು ಅಳವಡಿಸಲು ಅಗೆದಿರುವ ರಸ್ತೆಗಳನ್ನು ಕೂಡಲೇ ದುರಸ್ಥಿ ಕೆಲಸವನ್ನು ಪೂರ್ಣಗೊಳಿಸಲು ಕಳೆದ ಮೂರು ಸಭೆಯಲ್ಲಿ ತಿಳಿಸಿದ್ದರೂ ಸಹ ಇದುವರೆವಿಗೂ ಯಾವುದೇ ರೀತಿ ಕ್ರಮಗಳನ್ನು ಕೈಗೊಂಡಿರುವುದಿಲ್ಲ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು ಶೀಘ್ರವಾಗಿ HD ಕೇಬಲ್‌ಗಳನ್ನು ಅಳವಡಿಸಲು ಅಗೆದಿರುವ ರಸ್ತೆ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕರ ವಾಹನ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಈ ಮೂಲಕ ಕೋರಲಾಗಿದೆ.

**ಕ್ರಮ: – ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿದ್ಯುತ್)**
**ಅವಲಹಳ್ಳಿ ಉಪ ವಿಭಾಗ ಬೆಸ್ಕಾಂ ರವರಿಗೆ ಕ್ರಮ ವಹಿಸಲು ಕೋರಲಾಗಿರುತ್ತದೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

25/11/2020

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154–ಬಸವನಗುಡಿ

25/11/20

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ.
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿದ್ಯುತ್) ಅವಲಹಳ್ಳಿ ಉಪ ವಿಭಾಗ ರವರ ಅವಗಾಹನೆಗೆ.
8) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
9) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
10) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ ಸಲ್ಲಿಸುತ್ತಾ ಸಭೆಗೆ ಹಾಜರಾಗಲು ಕೋರಿದೆ.
11) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
12) ಕಛೇರಿ ಕಡತಕ್ಕೆ.

Scanned with CamScanner